**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಕೊಪ್ಪ**

**ಸಿ. ಸಿ. ನಂ.623/2024**

**ಪಿರ್ಯಾಧಿದಾರರುಃ** ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ., (ಪಿ.ಎ.ಸಿ.ಎಸ್.) ಕೊಪ್ಪ -577126, ಚಿಕ್ಕಮಗಳೂರು ಜಿಲ್ಲೆ ಇದರ ಪರವಾಗಿ ಹಾಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾದ ಶ್ರೀ ಮಂಜುನಾಥ ಕೆ.ಸಿ. ಬಿನ್ ಚಂದ್ರುಶೇಖರ್, 43 ವರ್ಷ, ಇವರಿಂದ ಪ್ರತಿನಿಧಿಸಲ್ಪಡುತ್ತದೆ.

**-ವಿರುದ್ದ -**

**ಆರೋಪಿಃ** ಶ್ರೀ ಸತೀಶ್ ಹೆಚ್ ಎಮ್. ಬಿನ್ ಮಂಜುಪ್ಪ ಗೌಡ, ಪ್ರಾಪ್ತ ವಯಸ್ಕರು, ವಾಸ ಬಾಳೆಗದ್ದೆ, ನರಸೀಪುರ, ನಾರ್ವೆ ಅಂಚೆ, ಕೊಪ್ಪ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

**ಆರೋಪಣೆ**

ಆರೋಪಿಯಾದ ನೀವು ಪಿರ್ಯಾದಿದಾರರ ಸಂಸ್ಥೆಯಿಂದ ಪಡೆದುಕೊಂಡ ಸಾಲದ ಬಾಬ್ತು ಅವರಿಗೆ ರೂ. 85,000/- ಚೆಕ್ ನಂ. 875111, ದಿನಾಂಕ 02.12.2023 ನ್ನು ನಮೂದಿಸಿದ ಕರ್ನಾಟಕ ಬ್ಯಾಂಕ್ ಲಿಮಿಟೆಡ್, ನಾರ್ವೆ ಶಾಖೆಯ ಒಂದು ಚೆಕ್ಕನ್ನು ನೀಡಿದ್ದು, ಅವರು ಸದರಿ ಚೆಕ್ಕನ್ನು ಸಿ.ಡಿ.ಸಿ.ಸಿ. ಕೊಪ್ಪ ಶಾಖೆಗೆ ಹಾಜರುಪಸಿದಾಗ ನಿಮ್ಮ **ಖಾತೆಯಲ್ಲಿ ಸಾಕಷ್ಟು ಹಣವಿಲ್ಲ** ಎಂಬ ಹಿಂಬರಹದೊಂದಿಗೆ ನೀವು ಕೊಟ್ಟಂತ ಚೆಕ್ ವಾಪಸ್ಸಾಗಿದ್ದು ಸದರಿ ಚೆಕ್ ಅಮಾನ್ಯಗೊಂಡ ಬಗ್ಗೆ ನಿಮ್ಮ ಗಮನಕ್ಕೆ ದಿನಾಂಕ 25.03.2024 ರಂತೆ ವಕೀಲರ ನೋಟೀಸು ನೀಡಿದ್ದು, ಸದರಿ ನೋಟೀಸು ದಿನಾಂಕ 30.03.2024 ರಂದು ನಿಮಗೆ ಜಾರಿಯಾಗಿದ್ದೂ ಸಹ ನೀವು ಚೆಕ್ ಬಾಬ್ತು ಹಣವನ್ನು ನೀಡದೇ ವರ್ಗಾವಣೀಯ ಲಿಖಿತ ಅಧಿನಿಯಮ ಕಲಂ 138 ರ ಅಡಿಯಲ್ಲಿ ಅಪರಾಧವನ್ನು ನನ್ನ ಸಂಜ್ಞೆಯಲ್ಲಿ ಎಸಗಿರುತ್ತೀರಿ.

ಪ್ರಶ್ನೆ 1ಃ- ನಿಮಗೆ ಓದಿ ಹೇಳಿದ ಆರೋಪಣೆ ಅರ್ಥವಾಯಿತೇ?
ಉತ್ತರಃ **ತಿಳಿಯಿತು**.
ಪ್ರಶ್ನೆ 2ಃ- ಮೇಲಿನ ಆಪಾಧನೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗಬೇಕೆ?
ಉತ್ತರಃ **ವಿಚಾರಣೆಯಾಗಬೇಕು**.

ಮೇಲಿನ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಸ್ವತಃ ನಾನೇ ಬರೆದುಕೊಂಡಿರುವುದು ನಿಜವೆಂದು ದೃಡೀಕರಿಸುತ್ತೇನೆ.

ದಿನಾಂಕಃ 02.07.2025

**ಸಹಿ/- 02.07.2025.**
(ಎಂ.ಎನ್. ನಂದಿನಿ)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ಕೊಪ್ಪ